# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 19.01.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ನಂ.69, ಲಗ್ಗೆರೆಗೆ ಸಂಬಂಧಿಸಿದಂತೆ ಕೆಂಪೇಗೌಡನಗರ ಹೊರವರ್ತುಲ ರಸ್ತೆ ಹತ್ತಿರ ಜೆ.ಎನ್.ಎನ್.ಯು.ಆರ್.ಎಂ. ಯೋಜನೆಯಡಿಯಲ್ಲಿ ರೂ.1.15 ಕೋಟಿಗಳ ವೆಚ್ಚದಲ್ಲಿ ಮಳೆನೀರುಗಾಲುವೆ ಚರಂಡಿ ನಿರ್ಮಾಣ ಕಾಮಗಾರಿಗೆ ಇಂದು ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಶ್ರೀ ಎಂ.ಶ್ರೀನಿವಾಸ್ ರವರು ಗುದ್ದಲಿ ಪೂಜೆಯನ್ನು ನೆರವೇರಿಸಿದರು.

ಈ ಸಂದರ್ಭದಲ್ಲಿ ಬಿಬಿಎಂಪಿಯ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸ್ಥಾಯಿ ಸಮಿತಿ ಅಧ್ಯಕ್ಷರು ಹಾಗೂ ಲಗ್ಗೆರೆ ವಾರ್ಡ್‌ನ ಮಹಾನಗರ ಪಾಲಿಕೆ ಸದಸ್ಯರಾದ ಶ್ರೀ ಲಕ್ಷ್ಮೀಕಾಂತ ರೆಡ್ಡಿ, ಕೊಟ್ಟಿಗೆಪಾಳ್ಯ, ವಾರ್ಡ್ ನಂ.73ರ ಪಾಲಿಕೆ ಸದಸ್ಯರಾದ ಶ್ರೀ ವೆಂಕಟೇಶ್ ಬಾಬು, ಕಾರ್ಯಪಾಲಕ ಅಭಿಯಂತರರಾದ ಶ್ರೀ ಕೆ.ಜಿ.ಗೋಪಾಲಯ್ಯ, ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಶ್ರೀ ಡಿ.ಹೇಮಂತ್ ಮತ್ತು ಗುತ್ತಿಗೆದಾರರಾದ ಶ್ರೀ ಉಮಾಪತಿನಾಯ್ಡು, ವಾರ್ಡ್ ಅಧ್ಯಕ್ಷರಾದ ಶ್ರೀ ಎಸ್.ಆರ್.ವೆಂಕಟೇಶ್, ಮುಖಂಡರಾದ ಶ್ರೀ ಕಳಸಪ್ಪ, ಮಣಿ, ಪೆರುಮಾಳ್ ರೆಡ್ಡಿ, ಶ್ರೀನಿವಾಸ್, ಶ್ರೀಮತಿ ಲಕ್ಷ್ಮಿ ಮತ್ತು ಶ್ರೀಮತಿ ಪ್ರೇಮಲತಾ ರವರು ಉಪಸ್ಥಿತರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 19.01.2011**

77ನೇ ಕನ್ನಡ ಸಾಹಿತ್ಯ ಸಮ್ಮೇಳನವು 2011ರ ಫೆಬ್ರವರಿ 6 ರಿಂದ 8ರ ವರೆಗೆ ಬೆಂಗಳೂರಿನಲ್ಲಿ ನಡೆಯುತ್ತಿರುವ ಹಿನ್ನೆಲೆಯಲ್ಲಿ ಜನವರಿ 2011ರ ಮಾಹೆಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿಕಾರಿ/ನೌಕರರ ಒಂದು ದಿನದ ವೇತನವನ್ನು ಕೊಡುಗೆಯಾಗಿ ನೀಡಲು ಒಪ್ಪಿರುತ್ತಾರೆಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ನೌಕರರ ಕೇಂದ್ರೀಯ ಸಂಘದ ಅಧ್ಯಕ್ಷರಾದ ಶ್ರೀ ಆರ್.ಸುಬ್ರಮಣ್ಯಂ ಹಾಗೂ ಬೆಂಗಳೂರು ಮಹಾನಗರ ಪಾಲಿಕೆ ನೌಕರರ ಕನ್ನಡ ಸಂಘದ ಅಧ್ಯಕ್ಷರಾದ ಶ್ರೀ ರ.ಕೃಷ್ಣಮೂರ್ತಿ (ಸಂಗೊಳ್ಳಿ) ರವರುಗಳು ತಿಳಿಸಿರುವ ಹಿನ್ನೆಲೆಯಲ್ಲಿ ಪೂಜ್ಯ ಮಹಾಪೌರರು ಒಪ್ಪಿರುತ್ತಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**